ಕಾರ್ಯದರ್ಶಿಗಳು ಸೇವೆ ಸಲ್ಲಿಸುತ್ತಿದ್ದಾರೆ.

2. ಭರ್ತಿ ಮಾಡಲು ಕೂಡಲೇ ಕ್ರಮ ಕೈಗೊಳ್ಳಲಾಗುತ್ತಿದೆ.

3. ಈ ಬಗ್ಗೆ ಕಾಲಕಾಲಕ್ಕೆ ಸುತ್ತೋಲೆ ಕೊಟ್ಟು ಸಾರ್ವಜನಿಕರಿಗೆ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಅರ್ಹ ಪ್ರಕರಣಗಳಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು.

ಐನಾಪುರ ಗ್ರಾಮದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ನೇಮಕಾತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 187(121)

ಸದಸ್ಯರ ಹೆಸರು: ಶ್ರೀ ಭರಮಗೌಡ ಎ.ಕಾಗೆ(ಕಾಗವಾಡ)

ಉತ್ತರಿಸುವ ಸಚಿವರು: ಶ್ರೀ ಹೆಚ್.ವಿಶ್ವನಾಥ್(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಪ್ರಶ್ನೆ

1. ಬೆಳಗಾಂ ಜಿಲ್ಲೆಯ ಅಥಣಿ ತಾಲ್ಲೂಕಿನ ಐನಾಪೂರ ಗ್ರಾಮದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಎಷ್ಟು ಜನ ಉಪಾನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ; ಯಾವ ಯಾವ ವಿಷಯಗಳಲ್ಲಿ ವಿದ್ಯಾರ್ಥಿಗಳಿಗೆ ಬೋಧನೆ ಮಾಡುತ್ತಿದ್ದಾರೆ ಮತ್ತು ಯಾವ ವಿಷಯದಲ್ಲಿ ಉಪನ್ಯಾಸಕರ ಹುದ್ದೆ ಖಾಲಿ ಇವೆ.

2. ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ?

3. ಸದರಿ ಪದವಿಪೂರ್ವ ಕಾಲೇಜಿನಲ್ಲಿ ಈಗ ಪ್ರಭಾರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಚಾರ್ಯರು. ಗುಂಪುಗಾರಿಕೆ ಮಾಡುವುದರ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

4. ಬಂದಿದ್ದರೆ ಅವರ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ಮತ್ತು ಪೂರ್ಣಾವಧಿ ಪ್ರಾಚಾರ್ಯರನ್ನು ನೇಮಿಸಲಾಗುವುದೇ?

ಉತ್ತರ

1. ಬೆಳಗಾಂ ಜಿಲ್ಲೆಯ ಅಥಣಿ ತಾಲ್ಲೂಕಿನ ಐನಾಪೂರದಲ್ಲಿ ಸರ್ಕಾರಿ ಪದವಿಪೂರ್ವ

ಕಾಲೇಜು ಇರುವುದಿಲ್ಲ. ಪ್ರಶ್ನೆಗಳು ಉದ್ಭವಿಸುವುದಿಲ್ಲ.

2. ಉದ್ಭವಿಸುವುದಿಲ್ಲ.

3. ಉದ್ಭವಿಸುವುದಿಲ್ಲ.

4. ಉದ್ಭವಿಸುವುದಿಲ್ಲ.

ಅಥಣಿ ತಾಲ್ಲೂಕಿನಲ್ಲಿರುವ ಐನಾಪೂರ ಗ್ರಾಮದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಹುದ್ದೆಗಳ ಭರ್ತಿ ಮಾಡುವ ಬಗ್ಗೆ

ಚುಕ್ಕೆ ರಹಿತ ಗುರುತಿನ ಪ್ರಶ್ನೆ ಸಂಖ್ಯೆ: 188(357)

ಸದಸ್ಯರ ಹೆಸರು: ಶ್ರೀ ಭರಮಗೌಡ ಅ.ಕಾಗೆ(ಕಾಗೆವಾಡ)

ಉತ್ತರಿಸುವ ಸಚಿವರು: ಡಾ॥ಜಿ.ಪರಮೇಶ್ವರ(ಉನ್ನತ ಶಿಕ್ಷಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು)

ಪ್ರಶ್ನೆ

1) ಅಥಣಿ ತಾಲ್ಲೂಕಿನ ಐನಾಪುರ ಗ್ರಾಮದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎಷ್ಟು ಜನ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದು ಯಾವ ಯಾವ ವಿಷಯಗಳಲ್ಲಿ ವಿದ್ಯಾರ್ಥಿಗಳಿಗೆ ಬೋಧನೆ ಮಾಡುತ್ತಿದ್ದಾರೆ ಮತ್ತು ಯಾವ ವಿಷಯದಲ್ಲಿ?

2) ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೆ?

3) ಪ್ರಭಾರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಚಾರ್ಯರು, ಗುಂಪುಗಾರಿಕೆ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದರೆ ಇವರ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ, ಪೂರ್ಣಾವಧಿ ಪ್ರಾಂಶುಪಾಲರನ್ನು ನೇಮಿಸಲಾಗುವುದೇ?

ಉತ್ತರ

1) ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಐನಾಪುರ ಇಲ್ಲಿ 8 ಜನ ಉಪನ್ಯಾಸಕರು